**Akashvani : Bangalore**
**Regional Bulletin In Kannada**
**11.12.2025 / 14.30 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.12.2025 / 14.30 hrs**

**<><*<><>*><>**

**ಮುಖ್ಯಾಂಶಗಳು**

೧. ವಿವಿಧ ಇಲಾಖೆಗಳಲ್ಲಿ ೨ಲಕ್ಷದ ೮೪ ಸಾವಿರದ ೮೮೧ ಹುದ್ದೆಗಳು ಖಾಲಿ- ಮೇಲ್ಮನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೨. ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣದಲ್ಲಿ ಭಾರೀ ಕುಸಿತ

೩. ತಾಲೂಕು ಆಸ್ಪತ್ರೆಗಳಲ್ಲಿ ದಿನದ ೨೪ ಗಂಟೆ ವೈದ್ಯಕೀಯ ಸೇವೆ ಕಲ್ಪಿಸಲು ಸರ್ಕಾರ ನಿರ್ಧಾರ

೪. ಖಾನಾಪುರದ ಅಮಗಾಂ ನಿವಾಸಿಗಳನ್ನು ಸ್ಥಳಾಂತರಿಸಲು ಅರಣ್ಯ ಇಲಾಖೆ ಚಿಂತನೆ

೫. ನಾಯಕತ್ವ ವಿಚಾರ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದಲೇ ಉತ್ತರ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ

**<><*<><>*><>**

ರಾಜ್ಯದ ವಿವಿಧ ಇಲಾಖೆಗಳಲ್ಲಿ ಎರಡು ಲಕ್ಷದ ೮೪ ಸಾವಿರದ ೮೮೧ ಹುದ್ದೆಗಳು ಖಾಲಿ ಇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನ ಪರಿಷತ್ತಿನಲ್ಲಿಂದು ತಿಳಿಸಿದ್ದಾರೆ. ಪ್ರಶ್ನೋತ್ತರಕಲಾಪದಲ್ಲಿ ಬಿಜೆಪಿಯ ಹಣಮಂತ ನಿರಾಣಿ ಅವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ, ಒಳ ಮೀಸಲಾತಿ ವಿವಾದದ ಹಿನ್ನೆಲೆಯಲ್ಲಿ ಸರ್ಕಾರಿ ಹುದ್ದೆಗಳಿಗೆ ನೇಮಕಾತಿ ಮಾಡುವಲ್ಲಿ ವಿಳಂಬವಾಗಿದೆ. ಮುಂಬರುವ ದಿನಗಳಲ್ಲಿ ಹಂತ ಹಂತವಾಗಿ ನೇಮಕಾತಿ ಪ್ರಕ್ರಿಯೆ ನಡೆಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ೨೪ ಸಾವಿರದ ೩೦೦ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆ ಈಗಾಗಲೇ ಅನುಮೋದನೆ ನೀಡಿದೆ. ಆದಷ್ಟು ಬೇಗ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಲಿದೆ ಎಂದು ತಿಳಿಸಿದ್ದಾರೆ. ಒಳ ಮೀಸಲಾತಿ ಸಮಸ್ಯೆ ಈಗ ಬಗೆಹರಿದಿರುವುದರಿಂದ ಹುದ್ದೆಗಳ ಬರ್ತಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಹೇಳಿದ್ದಾರೆ.

**<><*<><>*><>**

ಕಳೆದ ೧೫ ವರ್ಷಗಳಲ್ಲಿ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಪ್ರಮಾಣ ೧೭ ಲಕ್ಷ ಕುಸಿತವಾಗಿರುವ ಆತಂಕಕಾರಿ ವಿಷಯವನ್ನು ವಿಧಾನಸಭೆಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧುಬಂಗಾರಪ್ಪ ಬಹಿರಂಗಪಡಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಎಸ್.ಸುರೇಶ ಕುಮಾರ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಆಂಗ್ಲ ಮಾಧ್ಯಮ ಶಿಕ್ಷಣ, ಕೇಂದ್ರೀಯ ಪಠ್ಯಕ್ರಮ, ಪೋಷಕರ, ವಿದ್ಯಾರ್ಥಿಗಳ ವಲಸೆ ಹಾಗೂ ಹೆಚ್ಚು ಸಂಖ್ಯೆಯ ಖಾಸಗಿ ಶಾಲೆಗಳ ಸ್ಥಾಪನೆಯಿಂದ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ ೧೭ ಲಕ್ಷ ಕಡಿಮೆಯಾಗಿದೆ ಎಂದು ಹೇಳಿದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಒದಗಿಸುವ ಉದ್ದೇಶದಿಂದ ಪ್ರಸ್ತುತ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ೫ ಸಾವಿರದ ೨೬೭ ಮತ್ತು ರಾಜ್ಯದ ಇತರೇ ಜಿಲ್ಲೆಗಳಲ್ಲಿ ೫ ಸಾವಿರ ಶಿಕ್ಷಕರ ನೇಮಕಾತಿಗೆ ಕ್ರಮವಹಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ದಿನದ ೨೪ ಗಂಟೆ ವೈದ್ಯಕೀಯ ಸೇವೆ ಕಲ್ಪಿಸಲು ಸರ್ಕಾರ ಯೋಜನೆ ರೂಪಿಸಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ದೊಡ್ಡನಗೌಡ ಹನುಮಗೌಡ ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯರ ಸಂಖ್ಯೆ ಕಡಿಮೆ ಇರುವುದರಿಂದ ಸಂಜೆ ನಾಲ್ಕು ಗಂಟೆ ತನಕ ವೈದ್ಯರ ಲಭ್ಯತೆ ಇರುತ್ತಿರಲಿಲ್ಲ. ಆದರೆ ಈಗ ದಿನದ ೨೪ ಗಂಟೆ ವೈದ್ಯಕೀಯ ಸೇವೆ ಕಲ್ಪಿಸುವ ಸಲುವಾಗಿ ಪ್ರತಿ ತಾಲ್ಲೂಕು ಆಸ್ಪತ್ರೆಗಳಿಗೆ ಇಬ್ಬರು ಪ್ರಸೂತಿ ತಜ್ಞರು, ಇಬ್ಬರು ಅರವಳಿಕೆ, ಇಬ್ಬರು ಮಕ್ಕಳ ತಜ್ಞರು, ಒಬ್ಬರು ರೆಡಿಯಾಲಜಿಸ್ಟ್ ಮತ್ತು ವೈದ್ಯರನ್ನು ನೇಮಕ ಮಾಡಲಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ. ಗ್ರಾಮೀಣ ಭಾಗದಲ್ಲಿ ಕಡ್ಡಾಯ ಸೇವೆ ಯೋಜನೆಯಡಿ ೧ ಸಾವಿರದ ೫೦೦ ವೈದ್ಯರನ್ನು ನೇಮಕ ಮಾಡಿಕೊಳ್ಳಲು ಕ್ರಮಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದ ತಾಲ್ಲೂಕು, ಜಿಲ್ಲಾ ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಉನ್ನತಿಕರಣ ಮಾಡುವುದರ ಜೊತೆಗೆ ಅಗತ್ಯವಿರುವ ಕಡೆಗೆ ಹೊಸ ಆಸ್ಪತ್ರೆಗಳನ್ನು ನಿರ್ಮಿಸಲಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ಮಾನವ ವನ್ಯಜೀವಿ ಸಂಘರ್ಷ ನಿಯಂತ್ರಿಸಲು ಹಾಗೂ ಅರಣ್ಯವಾಸಿಗಳನ್ನು ಸಮಾಜದ ಮುಖ್ಯವಾಹಿನಿಗೆ ತರಲು ಖಾನಾಪುರ ತಾಲೂಕಿನ ಅರಣ್ಯದೊಳಗಿರುವ ಅಮಗಾಂವ್ ನಿವಾಸಿಗಳನ್ನೂ ಸ್ಥಳಾಂತರಿಸಲು ಕ್ರಮ ವಹಿಸಲಾಗುವುದು ಎಂದು ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ ಭರವಸೆ ನೀಡಿದ್ದಾರೆ. ಬೆಳಗಾವಿಯಲ್ಲಿ ಇಂದು ತಮ್ಮನ್ನು ಭೇಟಿ ಮಾಡಿ ಸ್ಥಳಾಂತರಕ್ಕೆ ಮನವಿ ಸಲ್ಲಿಸಿದ ಅಮರಗಾಂವ್ ನಿವಾಸಿಗಳನ್ನುದ್ದೇಶಿಸಿ ಮಾತನಾಡಿದ ಅವರು, ಹುಲಿ ಸಂರಕ್ಷಿತ ಪ್ರದೇಶವಲ್ಲದ ಭೀಮಗಢ ಅಭಯಾರಣ್ಯದ ತಳೇವಾಡಿಯ ೨೭ ಕುಟುಂಬಗಳನ್ನು ಈಗಾಗಲೇ ಯಶಸ್ವಿಯಾಗಿ ಸ್ಥಳಾಂತರಿಸಲಾಗಿದೆ. ಅದೇ ರೀತಿ ಅಮರಗಾವ್ ಮತ್ತು ಇತರ ವಸತಿ ಪ್ರದೇಶಗಳ ಸ್ಥಳಾಂತರಕ್ಕೂ ಕ್ರಮ ವಹಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ನಾಯಕತ್ವ ವಿಚಾರವಾಗಿ ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ತರ ನೀಡಲಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದ್ವೇಷ ಭಾಷಣ ತಡೆ ವಿಧೇಯಕ ಮಂಡನೆಗೆ ಬಿಜೆಪಿ ವಿರೋಧ ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯಿಸಿ, ಬಿಜೆಪಿ ನಾಯಕರಿಗೆ ಸಂವಿಧಾನಕ್ಕೆ ಗೌರವ ಕೊಡುವ ಇಚ್ಛೆ ಇದ್ದರೆ, ಅದನ್ನು ಪಾಲಿಸಲಿ ಎಂದು ತಿಳಿಸಿದ್ದಾರೆ. ನೆಹರು ಹಾಗೂ ಇಂದಿರಾ ಗಾಂಧಿ ಕಾಲದಲ್ಲಿ ಬ್ಯಾಲೆಟ್ ಪೇಪರ್ ಬಳಸಲಾಗುತ್ತಿತ್ತು. ಹೀಗಿರುವಾಗ ಮತ ಕಳ್ಳತನ ಹೇಗೆ ಸಾಧ್ಯ?" ಎಂದು ಅವರು ಬಿಜೆಪಿ ನಾಯಕರನ್ನು ಪ್ರಶ್ನಿಸಿದ್ದಾರೆ.

**<><*<><>*><>**

ಹೊಸ ತಲೆಮಾರಿಗೆ ಜನಪದ ಆಟಗಳ ಪರಿಚಯದ ಅಗತ್ಯವಿದೆ ಎಂದು ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್ ತಿಳಿಸಿದ್ದಾರೆ. ಬೆಳಗಾವಿಯ ಲೇಲೆ ಮೈದಾನದಲ್ಲಿ ಶಾಸಕ ಅಭಯ ಪಾಟೀಲ ಅವರು ಆಯೋಜಿಸಿದ್ದ ಮರೆತುಹೋದ ಬಾಲ್ಯದ ಜನಪದ ಆಟಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಆಟಗಳು ಸಾಮಾಜಿಕ ಸ್ವಾಸ್ಥ್ಯ ಕಾಪಾಡುವಲ್ಲಿ ಪ್ರಧಾನ ಪಾತ್ರವಹಿಸಿದ್ದು, ಸೋಲು - ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸಲಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಯು.ಟಿ. ಖಾದರ್ ( ೨೯ ಸೆಕೆಂಡ್ಸ್)**

<><*<><>*><>

ಉರುಳು ಹಾಕಿ ಪ್ರಾಣಿಗಳನ್ನು ಹತ್ಯೆಗೈಯುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಅರಣ್ಯಾಧಿಕಾರಿಗಳಿಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೂಚನೆ ನೀಡಿದ್ದಾರೆ. ಶಿವಮೊಗ್ಗ ಜಿಲ್ಲೆಯ ವನ್ಯಜೀವಿ ವಿಭಾಗಗಳಲ್ಲಿ ಕಳೆದ ೭ ತಿಂಗಳುಗಳಲ್ಲಿ ೧೧

ಕರಡಿ ಮತ್ತು ೪ ಚಿರತೆಗಳು ಅಕ್ರಮವಾಗಿ ಅಳವಡಿಸಿದ್ದ ಉರುಳಿಗೆ ಸಿಲುಕಿ ಸಾವನಪ್ಪಿವೆ. ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಆನೆ ಕಂದಕಗಳ ಬಳಿ ಬೆಳೆದ ಹುಲ್ಲಿನ ನಡುವೆ ಉರುಳು ಅಳವಡಿಸಿ ಕಳ್ಳಬೇಟೆ ಪ್ರಯತ್ನ ನಡೆಯುತ್ತಿದೆ. ಇದರ ಜೊತೆಗೆ ಭದ್ರಾವತಿ, ಚಿಕ್ಕಮಗಳೂರು ಭಾಗದಲ್ಲೂ ಈ ರೀತಿಯ ಸಮಸ್ಯೆ ಇರುವ ಬಗ್ಗೆ ದೂರುಗಳು ಬಂದಿವೆ. ಉರುಳು ಮತ್ತು ತಂತಿ ಬೇಲಿಗೆ ಅಕ್ರಮವಾಗಿ ಹರಿಸುವ ವಿದ್ಯುತ್ ಸ್ಪರ್ಶದಿಂದ ವನ್ಯಜೀವಿಗಳು ಸಾವಿಗೀಡಾಗುತ್ತಿವೆ. ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಈ ಕುರಿತಂತೆ ಒಂದು ವಿಶೇಷ ತಂಡ ರಚಿಸಿ ಕಾಡಿನಂಚಿನ ಗ್ರಾಮದ ಜನರಿಗೆ ಜಾಗೃತಿ ಮೂಡಿಸಿ, ಉರುಳುಗಳನ್ನು ತೆರವು ಮಾಡಿಸಬೇಕು. ವನ್ಯಜೀವಿಗಳ ಸಾವಿಗೆ ಕಾರಣರಾದವರ ವಿರುದ್ಧ ಪ್ರಕರಣ ದಾಖಲಿಸುಂತೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೂಚನೆ ನೀಡಿದ್ದಾರೆ.

**<><*<><>*><>**

ಮನೆ ಮನೆಗೆ ಪೊಲೀಸ್ ಕಾರ್ಯಕ್ರಮದಡಿ ದಾವಣಗೆರೆ ಜಿಲ್ಲೆಯಲ್ಲಿ ೩ ಲಕ್ಷದ ೯೭ ಸಾವಿರ ಮನೆಗಳಿಗೆ ಭೇಟಿ ನೀಡಲಾಗಿದ್ದು, ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ. ದಾವಣಗೆರೆ ತಾಲ್ಲೂಕಿನ ಮಾಯಕೊಂಡ ಪೊಲೀಸ್ ಠಾಣಾ ಆವರಣದಲ್ಲಿಂದು ನಡೆದ ಜನ ಸಂಪರ್ಕ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ೪ ಲಕ್ಷ ಮನೆಗಳ ಪೈಕಿ ಈಗಾಗಲೇ ೩ ಲಕ್ಷದ ೩೭ ಸಾವಿರ ಮನೆಗಳಿಗೆ ಭೇಟಿ ನೀಡಿ ಕಾನೂನು ತಿಳುವಳಿಕೆ ನೀಡಲಾಗಿದೆ. ಹೆಚ್ಚುತ್ತಿರುವ ಸೈಬರ್ ವಂಚನೆಗಳ ಬಗ್ಗೆ ಜಾಗೃತಿ ವಹಿಸಲು ಸೂಚಿಸಲಾಗಿದ್ದು, ತುರ್ತು ಸಂದರ್ಭಗಳಲ್ಲಿ ೧೧೨ ಸಂಖ್ಯೆಗೆ ಕರೆ ಮಾಡಲು ಕೋರಲಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ಕೋಲಾರಮ್ಮ ಸ್ವಚ್ಛತಾ ಕಾರ್ಯಪಡೆ ಹಾಗೂ ನಗರಸಭೆ ಅಧಿಕಾರಿಗಳು ಮುಳಬಾಗಿಲು ನಗರದ ಹಲವು ಅಂಗಡಿ ಮಳಿಗೆಗಳ ಮೇಲೆ ದಾಳಿ ನಡೆಸಿ ಸುಮಾರು ೨೧೦ ಕೆ.ಜಿ ನಿಷೇಧಿತ ಪ್ಲಾಸ್ಟಿಕ್ ಉತ್ಪನ್ನಗಳನ್ನು ವಶಪಡಿಸಿಕೊಂಡು ೧ ಲಕ್ಷದ ೭೦೦ ರೂಪಾಯಿ ದಂಡ ವಸೂಲಿ ಮಾಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**